ಇ) ಮೇಲ್ಕಂಡ ಕೊಳವೆ ಬಾವಿಯಿಂದ ಗಡಂಪಲ್ಲಿ ಗ್ರಾಮಕ್ಕೆ ನೀರು ಸರಬರಾಜು ಮಾಡುವ ಕಾಮಗಾರಿಯನ್ನು 2003–04ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗಿದ್ದು, ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ರೋಣ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಯೋಜನೆ

4077 (4565) : ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ್ (ರೋಣ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿವೆ;

ಆ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಇದೆ;

ಇ) ಉಪನ್ಯಾಸಕರ ಕೊರತೆಗೆ ಕಾರಣವೇನು;

ಈ) ಗದಗ ಜಿಲ್ಲೆ ರೋಣ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಉ) ಉಪನ್ಯಾಸಕರ ಕೊರತೆ ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು)

ಅ) 684

ಆ) 495

ಇ) ಉಪನ್ಯಾಸಕರ ನಿವೃತ್ತಿ ಮತ್ತು ಬಡ್ತಿಗಳಿಂದ ಹೆಚ್ಚಿನ ಉಪನ್ಯಾಸಕರ ಹುದ್ದೆಗಳು ಖಾಲಿ ಆಗಿವೆ.

ಈ) ಹೌದು.

ಉ) ಕಾರ್ಯಭಾರ ಕಡಿಮೆ ಇರುವ ಹತ್ತಿರದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಂದ ಉಪನ್ಯಾಸಕರುಗಳನ್ನು ವಾರದಲ್ಲಿ 3 ದಿನ ನಿಯೋಜಿಸುವ ಮೂಲಕ ಕಾರ್ಯಭಾರವನ್ನು ನೀಗಿಸಲು ಜಿಲ್ಲಾ ಉಪನಿರ್ದೇಶಕರಿಗೆ ಪಹಿಸಲಾಗಿದೆ. ಬಡ್ತಿಗೆ ಮೀಸಲಾದ ಹುದ್ದೆಗಳನ್ನು ಅರ್ಹ ಪ್ರೌಢಶಾಲಾ ಸಹ ಶಿಕ್ಷಕರುಗಳಿಗೆ ಬಡ್ತಿ ನೀಡುವ ಮೂಲಕ ತುಂಬಲು ಕ್ರಮಕೈಗೊಳ್ಳಲಾಗುತ್ತಿದೆ. ಕರ್ನಾಟಕ ನಾಗರೀಕ ಸೇವೆಗಳು (ಅಂಶಕಾಲಿಕ ಉಪನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿರುವ ವ್ಯಕ್ತಿಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ವಿಲೀನಗೊಳಿಸುವಿಕೆ) (ವಿಶೇಷ) ನಿಯಮಾವಳಿಗಳು 1997, ದಿನಾಂಕ: 26.7.2003 ರಂದು ಜಾರಿಗೆ ಬಂದಿದ್ದು, ಆ ನಿಯಮಾವಳಿಗಳ ಪ್ರಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅರ್ಹ ಅಂಶಕಾಲಿಕ ಉಪನ್ಯಾಸಕರನ್ನು ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ನೇಮಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಆಯುರ್ವೇದ ಪದವಿಗೆ ಮಾನ್ಯತೆ ಇಲ್ಲದೇ ಇರುವುದು

4091 (4717) : ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?